ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು - 560 012.

ದೂರವಾಣಿ : 080-2346 1575/2346 2599/2346 2758/2356 4583/2356 8201/2356 8202 ಫ್ಯಾಕ್ಸ್ : 080-2346 1576

ನಂ.ಇಡಿ/ಕೆಇಎ/ಲೀಗಲ್ ಸೆಲ್/ಸಿಆರ್–57/2012–13 ದಿನಾಂಕ : 26–02–2013

## 2013–14ನೇ ಸಾಲಿಗೆ ಕರ್ನಾಟಕದ ವೃತ್ತಿಪರ ಕೋರ್ಸುಗಳಿಗೆ ಪ್ರವೇಶ

1. ಕರ್ನಾಟಕ ರಾಜ್ಯದಲ್ಲಿರುವ ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿ ಈ ಕೆಳಗಿನ ಕೋರ್ಸುಗಳಿಗೆ 2013–14ನೇ ಶೈಕ್ಷಣಿಕ ವರ್ಷಕ್ಕೆ ಸರ್ಕಾರವು ನಿಗದಿಪಡಿಸುವ ಸೀಟುಗಳ ಪ್ರವೇಶಕ್ಕಾಗಿ ನಡೆಸಲಾಗುವ ಸಾಮಾನ್ಯ ಪ್ರವೇಶ ಪರೀಕ್ಷೆ 2013ಕ್ಕೆ ಕರ್ನಾಟಕದ ಅರ್ಹ ಅಭ್ಯರ್ಥಿಗಳಿಂದ ಹಾಗೂ ಜಮ್ಮು ಮತ್ತು ಕಾಶ್ಮೀರಿ ವಲಸೆಗಾರರ ಅಭ್ಯರ್ಥಿಗಳಿಂದಲೂ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2013ನೇ ಸಾಲಿನ ವೈದ್ಯಕೀಯ / ದಂತವೈದ್ಯಕೀಯ ಕೋರ್ಸುಗಳ ಪ್ರವೇಶವು ಭಾರತದ ಸರ್ವೋಚ್ಛ ನ್ಯಾಯಾಲಯವು ವರ್ಗಾವಣೆಗೊಂಡ ಪ್ರಕರಣ ಸಂಖ್ಯೆ (ಸಿ) 101 / 2012 ರಲ್ಲಿ ನೀಡಬಹುದಾದ ಸೂಚನೆ / ನಿರ್ದೇಶನಕ್ಕೆ ಒಳಪಟ್ಟಿರುತ್ತದೆ.

2. ಶೈಕ್ಷಣಿಕ ಅರ್ಹತೆ

| ಕ್ರಮ ಸಂಖ್ಯೆ | ಮೊದಲನೇ ವರ್ಷದ ಕೋರ್ಸಿಗೆ ಪ್ರವೇಶ | ಅರ್ಹತೆ | | ಮೆರಿಟ್ / ರ್‍ಯಾಂಕ್ ನಿಗದಿ ಪಡಿಸುವುದಕ್ಕೆ ಮಾನದಂಡ |
|---|---|---|---|---|
| | | ಅರ್ಹತಾ ಪರೀಕ್ಷೆಯಲ್ಲಿ ಅಭ್ಯರ್ಥಿಯು | ಸಿಇಟಿ ಪರೀಕ್ಷೆಯಲ್ಲಿ, ಅಭ್ಯರ್ಥಿಯು | |
| 1. | ವೈದ್ಯಕೀಯ / ದಂತವೈದ್ಯಕೀಯ (ಎಂ.ಬಿ.ಬಿ.ಎಸ್. / ಬಿ.ಡಿ.ಎಸ್.) | ಕರ್ನಾಟಕದ ಎರಡನೇ ಪಿಯುಸಿ / 12ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರಗಳನ್ನು ಐಚ್ಛಿಕ ವಿಷಯಗಳನ್ನಾಗಿ ಹಾಗೂ ಇಂಗ್ಲೀಷನ್ನು ಒಂದು ಭಾಷಾ ವಿಷಯವನ್ನಾಗಿ ತೆಗೆದುಕೊಂಡು ಅರ್ಹತಾ ಪರೀಕ್ಷೆಯ ಪಿಸಿಬಿ ವಿಷಯಗಳಲ್ಲಿ ಒಟ್ಟಾರೆ ಕನಿಷ್ಠ ಶೇಕಡ 50ರಷ್ಟು ಅಂಕಗಳನ್ನು ಪಡೆದು ತೇರ್ಗಡೆ ಹೊಂದಿರಬೇಕು. (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಗಳಿಗೆ ಸೇರಿರುವ ಅಭ್ಯರ್ಥಿಗಳು ಶೇ. 40%). | ಪಿಸಿಬಿ ವಿಷಯಗಳಲ್ಲಿ ಒಟ್ಟಾರೆ ಕನಿಷ್ಠ ಶೇಕಡ 50ರಷ್ಟು ಅಂಕಗಳನ್ನು ಪಡೆದಿರಬೇಕು. (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಗಳಿಗೆ ಸೇರಿರುವ ಅಭ್ಯರ್ಥಿಗಳು ಶೇ. 40%) | ಸಾಮಾನ್ಯ ಪ್ರವೇಶ ಪರೀಕ್ಷೆಯ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ವಿಷಯಗಳಲ್ಲಿ ಪಡೆದಿರುವ ಒಟ್ಟು ಅಂಕಗಳನ್ನು ಆಧರಿಸಿ, ರ್‍ಯಾಂಕ್ ಪ್ರಕಟಿಸಲಾಗುವುದು. |
| 2. | ಆಯುರ್ವೇದ ಹೋಮಿಯೋಪತಿ ಯುನಾನಿ, ನ್ಯಾಚುರೋಪತಿ ಮತ್ತು ಯೋಗ (ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ) | ಕರ್ನಾಟಕದ ಎರಡನೇ ಪಿಯುಸಿ / 12ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರಗಳನ್ನು ಐಚ್ಛಿಕ ವಿಷಯಗಳನ್ನಾಗಿ ಹಾಗೂ ಇಂಗ್ಲೀಷನ್ನು ಒಂದು ಭಾಷಾ ವಿಷಯವನ್ನಾಗಿ ತೆಗೆದುಕೊಂಡು ಅರ್ಹತಾ ಪರೀಕ್ಷೆಯ ಪಿಸಿಬಿ ವಿಷಯಗಳಲ್ಲಿ ಒಟ್ಟಾರೆ ಕನಿಷ್ಠ ಶೇಕಡ 50ರಷ್ಟು ಅಂಕಗಳನ್ನು ಪಡೆದು ತೇರ್ಗಡೆ ಹೊಂದಿರಬೇಕು. (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಗಳಿಗೆ ಸೇರಿರುವ ಅಭ್ಯರ್ಥಿಗಳು ಶೇ. 40%). | ಇಂತಿಷ್ಟೇ ಅಂಕಗಳನ್ನು ಪಡೆಯಬೇಕೆಂಬ ನಿಯಮವಿರುವುದಿಲ್ಲ. | ಸಾಮಾನ್ಯ ಪ್ರವೇಶ ಪರೀಕ್ಷೆ ಮತ್ತು ಅರ್ಹತಾ ಪರೀಕ್ಷೆಗಳಲ್ಲಿ ಪಿಸಿಬಿ ವಿಷಯಗಳಲ್ಲಿ ಪಡೆದಿರುವ ಒಟ್ಟು ಅಂಕಗಳನ್ನು ಸಮಾನವಾಗಿ ಗಣನೆಗೆ ತೆಗೆದುಕೊಂಡು ರ್‍ಯಾಂಕ್ ಪ್ರಕಟಿಸಲಾಗುವುದು. |
| 3. | ಇಂಜಿನಿಯರಿಂಗ್ / ತಾಂತ್ರಿಕ (ಬಿ.ಇ / ಬಿ. ಟೆಕ್) | ಕರ್ನಾಟಕದ ಎರಡನೇ ಪಿಯುಸಿ / 12ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ಭೌತಶಾಸ್ತ್ರ, ಗಣಿತಶಾಸ್ತ್ರ ವಿಷಯಗಳ ಜೊತೆಗೆ ರಸಾಯನಶಾಸ್ತ್ರ / ಬಯೋ–ಟೆಕ್ನಾಲಜಿ / ಜೀವಶಾಸ್ತ್ರ / ಎಲೆಕ್ಟ್ರಾನಿಕ್ಸ್ / ಕಂಪ್ಯೂಟರ್ ಸೈನ್ಸ್‌ಗಳಲ್ಲಿ ಯಾವುದಾದರೂ ಒಂದನ್ನು ಐಚ್ಛಿಕ ವಿಷಯವನ್ನಾಗಿ ಹಾಗೂ ಇಂಗ್ಲೀಷನ್ನು ಒಂದು ಭಾಷಾ ವಿಷಯವನ್ನಾಗಿ ತೆಗೆದುಕೊಂಡು, ಅರ್ಹತಾ ಪರೀಕ್ಷೆಯ ಐಚ್ಛಿಕ ವಿಷಯಗಳಲ್ಲಿ ಒಟ್ಟಾರೆ ಕನಿಷ್ಠ ಶೇಕಡ 45ರಷ್ಟು ಅಂಕಗಳನ್ನು ಪಡೆದು ತೇರ್ಗಡೆ ಹೊಂದಿರಬೇಕು. (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಗಳಿಗೆ ಸೇರಿರುವ ಅಭ್ಯರ್ಥಿಗಳು ಶೇ. 40%). | ಇಂತಿಷ್ಟೇ ಅಂಕಗಳನ್ನು ಪಡೆಯಬೇಕೆಂಬ ನಿಯಮವಿರುವುದಿಲ್ಲ. | ಸಾಮಾನ್ಯ ಪ್ರವೇಶ ಪರೀಕ್ಷೆ ಮತ್ತು ಅರ್ಹತಾ ಪರೀಕ್ಷೆಗಳಲ್ಲಿ ಪಿಸಿಎಂ ವಿಷಯಗಳಲ್ಲಿ ಪಡೆದಿರುವ ಒಟ್ಟು ಅಂಕಗಳನ್ನು ಸಮಾನವಾಗಿ ಗಣನೆಗೆ ತೆಗೆದುಕೊಂಡು ರ್‍ಯಾಂಕ್ ಪ್ರಕಟಿಸಲಾಗುವುದು. |
| 4. | ಆರ್ಕಿಟೆಕ್ಚರ್ (ಬಿ. ಆರ್ಕ್) | ಕರ್ನಾಟಕದ ಎರಡನೇ ಪಿಯುಸಿ / 12ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ಗಣಿತಶಾಸ್ತ್ರವನ್ನು ಐಚ್ಛಿಕ ವಿಷಯವನ್ನಾಗಿ ತೆಗೆದುಕೊಂಡು ಅರ್ಹತಾ ಪರೀಕ್ಷೆಯ ಎಲ್ಲಾ ವಿಷಯಗಳಲ್ಲಿ ಒಟ್ಟಾರೆ ಕನಿಷ್ಠ ಶೇಕಡ 50ರಷ್ಟು (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಹಾಗೂ ಅಂಗವಿಕಲ ಅಭ್ಯರ್ಥಿಗಳು (ಡಿಸ್‌ಲೆಕ್ಸಿಯಾ ಪ್ರಕರಣಗಳೂ ಸೇರಿ) ಶೇಕಡ 45ರಷ್ಟು) ಅಂಕಗಳನ್ನು ಪಡೆದು ತೇರ್ಗಡೆ ಹೊಂದಿರಬೇಕು. | NATA ಪರೀಕ್ಷೆಗೆ ಹಾಜರಾಗಿ ಕನಿಷ್ಠ ಶೇಕಡ 40ರಷ್ಟು ಅಂಕಗಳನ್ನು ಪಡೆದಿರಬೇಕು. (ಪ. ಜಾತಿ, ಪ. ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಗಳಿಗೆ ಅಭ್ಯರ್ಥಿಗಳೂ ಸೇರಿದಂತೆ) | ಅಭ್ಯರ್ಥಿಗಳು NATA ಪರೀಕ್ಷೆ ಮತ್ತು ಅರ್ಹತಾ ಪರೀಕ್ಷೆಗಳಲ್ಲಿ ಪಡೆದಿರುವ ಒಟ್ಟು ಅಂಕಗಳನ್ನು ಸಮಾನವಾಗಿ ಗಣನೆಗೆ ತೆಗೆದುಕೊಂಡು, ರ್‍ಯಾಂಕ್ ಪ್ರಕಟಿಸಲಾಗುವುದು. |
| 5. | ಬಿ.ಎಸ್‌ಸಿ. (ಕೃಷಿ)<br>ಬಿ.ಎಸ್‌ಸಿ. (ಫಾರೆಸ್ಟ್ರಿ)<br>ಬಿ.ಎಸ್‌ಸಿ. (ಸಿರಿಕಲ್ಚರ್)<br>ಬಿ.ಎಸ್‌ಸಿ. (ಅಗ್ರಿ ಬಯೋಟೆಕ್)<br>ಬಿ.ಎಸ್‌ಸಿ. (ತೋಟಗಾರಿಕೆ)<br>ಬಿ.ಹೆಚ್.ಎಸ್‌ಸಿ. (ಗೃಹ ವಿಜ್ಞಾನ) | ಕರ್ನಾಟಕದ ಎರಡನೇ ಪಿಯುಸಿ / 12ನೇ ತರಗತಿ ಪರೀಕ್ಷೆಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರಗಳನ್ನು ಐಚ್ಛಿಕ ವಿಷಯಗಳನ್ನು ತೆಗೆದುಕೊಂಡು ತೇರ್ಗಡೆ ಹೊಂದಿರಬೇಕು. | ಇಂತಿಷ್ಟೇ ಅಂಕಗಳನ್ನು ಪಡೆಯಬೇಕೆಂಬ ನಿಯಮವಿರುವುದಿಲ್ಲ. | ಸಾಮಾನ್ಯ ಪ್ರವೇಶ ಪರೀಕ್ಷೆ ಮತ್ತು ಅರ್ಹತಾ ಪರೀಕ್ಷೆಗಳಲ್ಲಿ ಪಿಸಿಬಿ ವಿಷಯಗಳಲ್ಲಿ ಪಡೆದಿರುವ ಒಟ್ಟು ಅಂಕಗಳನ್ನು ಸಮಾನವಾಗಿ ಗಣನೆಗೆ ತೆಗೆದುಕೊಂಡು ರ್‍ಯಾಂಕ್ ಪ್ರಕಟಿಸಲಾಗುವುದು. |
| 6. | ಬ್ಯಾಚುಲರ್ ಆಫ್ ವೆಟರ್ನರಿ ಸೈನ್ಸ್ ಆಂಡ್ ಅನಿಮಲ್ ಹಸ್ಬೆಂಡರಿ (ಬಿ.ವಿ.ಎಸ್‌ಸಿ. & ಎ.ಹೆಚ್.) | ಕರ್ನಾಟಕದ ಎರಡನೇ ಪಿಯುಸಿ / 12ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ ಮತ್ತು ಇಂಗ್ಲೀಷನ್ನು ತೆಗೆದುಕೊಂಡು ಒಟ್ಟಾರೆ ಕನಿಷ್ಠ ಶೇಕಡ 50ರಷ್ಟು ಅಂಕಗಳನ್ನು ಪಡೆದು ತೇರ್ಗಡೆ ಹೊಂದಿರಬೇಕು. (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಗಳಿಗೆ ಸೇರಿರುವ ಅಭ್ಯರ್ಥಿಗಳು ಶೇ. 40%). | ಇಂತಿಷ್ಟೇ ಅಂಕಗಳನ್ನು ಪಡೆಯಬೇಕೆಂಬ ನಿಯಮವಿರುವುದಿಲ್ಲ. | ಸಾಮಾನ್ಯ ಪ್ರವೇಶ ಪರೀಕ್ಷೆಯ ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ವಿಷಯಗಳಲ್ಲಿ ಪಡೆದಿರುವ ಒಟ್ಟು ಅಂಕಗಳನ್ನು ಆಧರಿಸಿ, ರ್‍ಯಾಂಕ್ ಪ್ರಕಟಿಸಲಾಗುವುದು. |
| 7. | ಬಿ.ಟೆಕ್ (ಫುಡ್ ಟೆಕ್ನಾಲಜಿ)<br>ಬಿ.ಟೆಕ್ (ಡೈರಿ ಟೆಕ್ನಾಲಜಿ)<br>ಬಿ.ಎಫ್.ಎಸ್‌ಸಿ. (ಫಿಶರಿ ಸೈನ್ಸ್)<br>ಬಿ.ಟೆಕ್ (ಫುಡ್ ಸೈನ್ಸ ಅಂಡ್ ಟೆಕ್ನಾಲಜಿ)<br>ಬಿ.ಎಸ್‌ಸಿ (ಅಗ್ರಿ ಮಾರ್ಕೆಟಿಂಗ್ ಮತ್ತು ಕೋಆಪರೇಶನ್) | ಕರ್ನಾಟಕದ ಎರಡನೇ ಪಿಯುಸಿ / 12ನೇ ತರಗತಿ ಪರೀಕ್ಷೆಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ ಮತ್ತು ಜೀವಶಾಸ್ತ್ರಗಳನ್ನು ಐಚ್ಛಿಕ ವಿಷಯಗಳನ್ನು ತೆಗೆದುಕೊಂಡು ತೇರ್ಗಡೆ ಹೊಂದಿರಬೇಕು. | ಇಂತಿಷ್ಟೇ ಅಂಕಗಳನ್ನು ಪಡೆಯಬೇಕೆಂಬ ನಿಯಮವಿರುವುದಿಲ್ಲ. | ಸಾಮಾನ್ಯ ಪ್ರವೇಶ ಪರೀಕ್ಷೆ ಮತ್ತು ಅರ್ಹತಾ ಪರೀಕ್ಷೆಗಳಲ್ಲಿ ಪಿಸಿಎಂಬಿ ವಿಷಯಗಳಲ್ಲಿ ಪಡೆದಿರುವ ಒಟ್ಟು ಅಂಕಗಳನ್ನು ಸಮಾನವಾಗಿ ಗಣನೆಗೆ ತೆಗೆದುಕೊಂಡು ರ್‍ಯಾಂಕ್ ಪ್ರಕಟಿಸಲಾಗುವುದು. |
| 8. | ಬಿ.ಟೆಕ್ (ಅಗ್ರಿಕಲ್ಚರ್ ಇಂಜಿನಿಯರಿಂಗ್) | ಕರ್ನಾಟಕದ ಎರಡನೇ ಪಿಯುಸಿ / 12ನೇ ತರಗತಿ ಪರೀಕ್ಷೆಯಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರಗಳನ್ನು ಐಚ್ಛಿಕ ವಿಷಯಗಳನ್ನು ತೆಗೆದುಕೊಂಡು ತೇರ್ಗಡೆ ಹೊಂದಿರಬೇಕು. | ಇಂತಿಷ್ಟೇ ಅಂಕಗಳನ್ನು ಪಡೆಯಬೇಕೆಂಬ ನಿಯಮವಿರುವುದಿಲ್ಲ. | ಸಾಮಾನ್ಯ ಪ್ರವೇಶ ಪರೀಕ್ಷೆ ಮತ್ತು ಅರ್ಹತಾ ಪರೀಕ್ಷೆಗಳಲ್ಲಿ ಪಿಸಿಎಂ ವಿಷಯಗಳಲ್ಲಿ ಪಡೆದಿರುವ ಒಟ್ಟು ಅಂಕಗಳನ್ನು ಸಮಾನವಾಗಿ ಗಣನೆಗೆ ತೆಗೆದುಕೊಂಡು ರ್‍ಯಾಂಕ್ ಪ್ರಕಟಿಸಲಾಗುವುದು. |